**All India Radio: Bangalore**
**National Bulletins In Kannada**
**29.08.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಟೋಕಿಯೋದಲ್ಲಿಂದು ನಡೆಯಲಿರುವ ೧೫ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೨. ಜಪಾನ್ -ಚೀನಾ ಭೇಟಿಯಿಂದ ಜಾಗತಿಕ ಶಾಂತಿ, ಭದ್ರತೆ ಮತ್ತು ಸುಸ್ಥಿರ ಅಭಿವೃದ್ಧಿ ಮುನ್ನಡೆಸಲು ಸಹಕಾರಿ-ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ

೩. ಅಹಮದಾಬಾದ್‌ನಲ್ಲಿ ಸೆಮಿಕಂಡಕ್ಟರ್ ವಲಯದ ಮೊದಲ ಸಿಜಿ ಪವರ್ ಪ್ರಾಯೋಗಿಕ ಘಟಕಕ್ಕೆ ಸಚಿವ ಅಶ್ವಿನಿ ವೈಷ್ಣವ್ ಚಾಲನೆ

೪. ಇಂದು ರಾಷ್ಟ್ರೀಯ ಕ್ರೀಡಾ ದಿನ. ಹಾಕಿ ಮಾಂತ್ರಿಕ, ದಂತಕತೆ ಮೇಜರ್ ಧ್ಯಾನ್ ಚಂದ್ ಸ್ಮರಣೆ

೫. ೧೨ನೇ ಪುರುಷರ ಏಷ್ಯಾ ಹಾಕಿ ಕಪ್ ಪಂದ್ಯಾವಳಿ, ಬಿಹಾರದ ರಾಜ್‌ಗಿರ್‌ನಲ್ಲಿಂದು ಆರಂಭ

**><><><><><><><><><**

ಪ್ರಧಾನಿ ನರೇಂದ್ರ ಮೋದಿ ಅವರು ಟೋಕಿಯೋದಲ್ಲಿಂದು ನಡೆಯಲಿರುವ ೧೫ನೇ ಭಾರತv-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿ ಅವರು ಎರಡು ದಿನಗಳ ಜಪಾನ್ ಭೇಟಿಗಾಗಿ ಇಂದು ಬೆಳಿಗ್ಗೆ ಟೋಕಿಯೋಗೆ ಆಗಮಿಸಿದರು. ಜಪಾನ್ ಪ್ರಧಾನಿ ಶಿಗೇರು ಇಶಿಬಾ ಅವರ ಆಹ್ವಾನದ ಮೇರೆಗೆ ನರೇಂದ್ರ ಮೋದಿ ಅವರು ಈ ಪ್ರವಾಸ ಕೈಗೊಂಡಿದ್ದಾರೆ. ಶೃಂಗಸಭೆಯ ವೇಳೆ ಉಭಯ ನಾಯಕರು, ಕಳೆದ ೧೧ ವರ್ಷಗಳಿಂದ ನಿರಂತರವಾಗಿ ಬೆಳಯುತ್ತಿರುವ ಎರಡೂ ದೇಶಗಳ ನಡುವಿನ ವಿಶೇಷ ಕಾರ್ಯತಾಂತ್ರಿಕ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯುವ ಮಾರ್ಗೋಪಾಯಗಳ ಬಗ್ಗೆ ಹಾಗೂ ದ್ವಿಪಕ್ಷೀಯ ಸಂಬಂಧದ ನಾನಾ ಆಯಾಮಗಳ ಬಗ್ಗೆ ಸಮಾಲೋಚನೆ ನಡೆಸಲಿದ್ದಾರೆ.

**><><><><><><><><><**

ಜಪಾನ್ ಮತ್ತು ಚೀನಾ ರಾಷ್ಟ್ರಗಳಿಗೆ ತಮ್ಮ ಭೇಟಿ ಭಾರತದ ರಾಷ್ಟ್ರೀಯ ಹಿತಾಸಕ್ತಿ ಮತ್ತು ಆದ್ಯತೆಗಳನ್ನು ಮತ್ತಷ್ಟು ಹೆಚ್ಚಿಸುತ್ತವೆ ಮತ್ತು ಪ್ರಾದೇಶಿಕ ಹಾಗೂ ಜಾಗತಿಕ ಶಾಂತಿ, ಭದ್ರತೆ ಮತ್ತು ಸುಸ್ಥಿರ ಅಭಿವೃದ್ಧಿ ಮುನ್ನಡೆಸುವಲ್ಲಿ ಫಲಪ್ರದ ಸಹಕಾರವನ್ನು ವೃದ್ಧಿಸಲು ಕೊಡುಗೆ ನೀಡುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಜಪಾನ್ ಭೇಟಿಗೂ ಮುನ್ನ ತಮ್ಮ ನಿರ್ಗಮನ ಹೇಳಿಕೆಯಲ್ಲಿ ಅವರು, ಕಳೆದ ಹನ್ನೊಂದು ವರ್ಷಗಳಿಂದ ಸ್ಥಿರ ಮತ್ತು ಗಮನಾರ್ಹ ಪ್ರಗತಿ ಸಾಧಿಸಿರುವ ಭಾರತ-ಜಪಾನ್ ವಿಶೇಷ ಕಾರ್ಯತಾಂತ್ರಿಕ ಮತ್ತು ಜಾಗತಿಕ ಸಹಭಾಗಿತ್ವದಲ್ಲಿ ಮುಂದಿನ ಹಂತವನ್ನು ರೂಪಿಸುಲು ಹೆಚ್ಚಿನ ಗಮನ ಹರಿಸಲಾಗುವುದು ಎಂದು ಹೇಳಿದರು. ಜಪಾನ್ ಪ್ರಧಾನಿ ಶಿಗೇರು ಇಶಿಬಾ ಮತ್ತು ಅವರು ಸಹಯೋಗಕ್ಕೆ ಹೊಸ ಆಯಾಮಗಳನ್ನು ನೀಡಲು, ಭಾರತ-ಜಪಾನ್ ಆರ್ಥಿಕ ಮತ್ತು ಹೂಡಿಕೆ ಸಂಬಂಧಗಳ ವ್ಯಾಪ್ತಿ ಮತ್ತು ಮಹತ್ವಾಕಾಂಕ್ಷೆ ವಿಸ್ತರಿಸಲು ಮತ್ತು ಕೃತಕ ಬುದ್ಧಿಮತ್ತೆ ಹಾಗೂ ಸೆಮಿಕಂಡಕ್ಟರ್ ಸೇರಿದಂತೆ ಹೊಸ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಮುನ್ನಡೆಸಲು ಪ್ರಯತ್ನಿಸುತ್ತಾರೆ ಎಂದು ಹೇಳಿದರು. ಈ ಭೇಟಿಯು ಎರಡು ರಾಷ್ಟ್ರಗಳ ಜನರನ್ನು ಸಂಪರ್ಕಿಸುವ ನಾಗರಿಕತೆಯ ಬಾಂಧವ್ಯಗಳು ಮತ್ತು ಸಾಂಸ್ಕೃತಿಕ ಸಂಬಂಧ ಬಲವರ್ಧನೆಗೊಳಿಸಲು ಒಂದು ಅವಕಾಶವಾಗಿದೆ ಎಂದು ಪ್ರಧಾನಿ ಹೇಳಿದರು. ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಆಹ್ವಾನದ ಮೇರೆಗೆ ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆಯ ಶೃಂಗಸಭೆಯಲ್ಲಿ ಭಾಗವಹಿಸಲು ಜಪಾನ್‌ನಿಂದ ಚೀನಾಕ್ಕೆ ಪ್ರಯಾಣಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಭಾರತ ಎಸ್‌ಸಿಒದಲ್ಲಿ ಸಕ್ರಿಯ ಮತ್ತು ರಚನಾತ್ಮಕ ಸದಸ್ಯ ರಾಷ್ಟ್ರವಾಗಿದೆ. ಹಂಚಿಕೆಯ ಸವಾಲುಗಳನ್ನು ಎದುರಿಸಲು ಮತ್ತು ಪ್ರಾದೇಶಿಕ ಸಹಕಾರವನ್ನು ಮತ್ತಷ್ಟು ವೃದ್ಧಿಸಲು ಎಸ್‌ಸಿಒ ಸದಸ್ಯರೊಂದಿಗೆ ಕಾರ್ಯನಿರ್ವಹಿಸಲು ಭಾರತ ಬದ್ಧವಾಗಿದೆ ಎಂದು ಅವರು ಹೇಳಿದ್ದಾರೆ. ಶೃಂಗಸಭೆಯ ನೇಪಥ್ಯದಲ್ಲಿ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತಿತರ ನಾಯಕರನ್ನು ಭೇಟಿ ಮಾಡಲು ಎದುರು ನೋಡುತ್ತಿರುವುದಾಗಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

><><><><><><><><

ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರು ಅಹಮದಾಬಾದ್‌ನ ಸನಂದ್‌ನಲ್ಲಿ ನಿನ್ನೆ ಸೆಮಿಕಂಡ್ಟರ್ ವಲಯದ ಮೊದಲು ಸಿಜಿ ಪವರ್

ಪ್ರಾಯೋಗಿಕ ಘಟಕವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಪೈಲಟ್ ಯೋಜನೆ ಭಾರತದ ಸೆಮಿಕಂಡಕ್ಟರ್ ಉದ್ಯಮದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಇದು ದೇಶದ ಮೊದಲ ಮೇಡ್ ಇನ್ ಇಂಡಿಯಾ ಸೆಮಿಕಂಡಕ್ಟರ್ ಚಿಪ್ ಅನ್ನು ತಯಾರಿಸಲಿದೆ ಎಂದರು. ೨೦೩೨ರ ವೇಳೆಗೆ ಜಾಗತಿಕ ಮಟ್ಟದಲ್ಲಿ ಸೆಮಿಕಂಡಕ್ಟರ್ ವೃತ್ತಿಪರರ ಕೊರತೆ ಎದುರಾಗಲಿದೆ, ಅದನ್ನು ಗಮನದಲ್ಲಿರಿಸಿಕೊಂಡು ಚಿಪ್ ತಂತ್ರಜ್ಞಾನದ ಅಭಿವೃದ್ಧಿಗೆ ಅಗತ್ಯ ಕೌಶಲ್ಯಹೊಂದಿದ ಮಾನವ ಸಂಪನ್ಮೂಲ ಸೃಷ್ಟಿಗೆ ಕೇಂದ್ರ ಸರಕಾರ ಅತ್ಯಾಧುನಿಕ ಸೌಕರ್ಯಗಳುಳ್ಳ ೨೭೦ ವಿಶ್ವವಿದ್ಯಾಲಯಗಳೊಂದಿಗೆ ಸಜ್ಜಾಗಿದೆ ಎಂದು ಹೇಳಿದರು.

ಧ್ವನಿ: ಅಶ್ವಿನಿ ವೈಷ್ಣವ್

><><><><><><><><

೨೦೨೪-೨೫ನೇ ಶೈಕ್ಷಣಿಕ ವರ್ಷದಲ್ಲಿ ಇದೇ ಮೊದಲ ಬಾರಿಗೆ ದೇಶದ ಒಟ್ಟು ಶಿಕ್ಷಕರ ಸಂಖ್ಯೆ ಒಂದು ಕೋಟಿ ಗಡಿ ದಾಟಿದೆ. ಭಾರತದಲ್ಲಿ ಶಾಲಾ ಶಿಕ್ಷಣದ ಕುರಿತು ಶಿಕ್ಷಣ ಸಚಿವಾಲಯದ ಏಕೀಕೃತ ಜಿಲ್ಲಾ ಶಿಕ್ಷಣ ಮಾಹಿತಿ ವ್ಯವಸ್ಥೆ -ಯುಡಿಐಎಸ್‌ಇ ಪ್ಲಸ್ ವರದಿಯಲ್ಲಿ ಈ ಅಂಶ ಬಹಿರಂಗವಾಗಿದೆ. ವರದಿಯ ಪ್ರಕಾರ, ಇದೇ ಅವಧಿಯಲ್ಲಿ ೨೦೨೨-೨೩ ಕ್ಕೆ ಹೋಲಿಸಿದರೆ ಶಿಕ್ಷಕರ ಪ್ರಮಾಣ ಶೇಕಡ ೬.೭ ರಷ್ಟು ಏರಿಕೆಯಾಗಿದೆ. ಈ ಮಧ್ಯೆ, ಭಾರತದಲ್ಲಿ ಸದ್ಯ ಸುಮಾರು ೧೫ ಲಕ್ಷ ಶಾಲೆಗಳಿದ್ದು, ೨೪ ಕೋಟಿಗೂ ಅಧಿಕ ವಿದ್ಯಾರ್ಥಿಗಳಿದ್ದಾರೆ. ಅವುಗಳಲ್ಲಿ, ಸುಮಾರು ಶೇ. ೫೦ರಷ್ಟು ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳಲ್ಲಿ ದಾಖಲಾಗಿದ್ದಾರೆ, ನಂತರ ಶೇಕಡ ೪೧ ರಷ್ಟು ಖಾಸಗಿ ಶಾಲೆಗಳಲ್ಲಿ ಮತ್ತು ಉಳಿದವರು ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ದಾಖಲಾಗಿದ್ದಾರೆ. ಅಲ್ಲದೆ, ಮಹಿಳಾ ಪ್ರಾತಿನಿಧ್ಯವೂ ಹೆಚ್ಚಾಗಿದೆ, ಶೇ. ೫೪.೩ಕ್ಕೂ ಅಧಿಕ ಶಾಲಾ ಶಿಕ್ಷಕರು ಮಹಿಳೆಯರಿದ್ದಾರೆ. ೨೦೨೪-೨೫ರ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿ-ಶಿಕ್ಷಕರ ಅನುಪಾತ-ಪಿಟಿಆರ್ ಸಹ ಸುಧಾರಿಸಿದೆ.

><><><><><><><><

ಸದ್ಯ ಸ್ಪೇನ್‌ನ ರಾಯಭಾರಿಯಾಗಿ ಸೇವೆ ಸಲ್ಲಿಸುತ್ತಿರುವ ದಿನೇಶ್ ಕೆ. ಪಟ್ನಾಯಕ್ ಅವರನ್ನು ಕೆನಡಾದ ಮುಂದಿನ ಹೈಕಮಿಷನರ್ ಆಗಿ ನೇಮಕ ಮಾಡಲಾಗಿದೆ ಎಂದು ಭಾರತ ಘೋಷಿಸಿದೆ. ೧೯೯೦ರ ಬ್ಯಾಚ್‌ನ ಭಾರತೀಯ ವಿದೇಶಾಂಗ ಸೇವಾ ಅಧಿಕಾರಿಯಾಗಿರುವ ಪಟ್ನಾಯಕ್ ಅವರು

ಶೀಘ್ರದಲ್ಲೇ ಕೆನಡಾ ಹೈಕಮೀಷನರ್ ಆಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ಹೇಳಿದೆ.  ಕೆನಡಾವು ನವದೆಹಲಿಯಲ್ಲಿ ತನ್ನ ಹೊಸ ಹೈಕಮಿಷನರ್ ಆಗಿ ಅನುಭವಿ ರಾಜತಾಂತ್ರಿಕ ಕ್ರಿಸ್ಟೋಫರ್ ಕೂಟರ್ ಅವರನ್ನು ನೇಮಕ ಮಾಡುವುದಾಗಿ ಘೋಷಿಸಿದೆ. ಕೂಟರ್ ೩೫ ವರ್ಷಗಳಿಗೂ ಅಧಿಕ ಕಾಲ ರಾಜತಾಂತ್ರಿಕ ಅನುಭವವನ್ನು ಹೊಂದಿದ್ದಾರೆ, ಇತ್ತೀಚೆಗೆ ಇಸ್ರೇಲ್‌ಗೆ ಕೆನಡಾದ ಚಾರ್ಜ್ ಡಿ'ಅಫೇರ್ಸ್ ಆಗಿ ಮತ್ತು ಈ ಹಿಂದೆ ದಕ್ಷಿಣ ಆಫ್ರಿಕಾ, ನಮೀಬಿಯಾ, ಲೆಸೊಥೊ, ಮಾರಿಷಸ್ ಮತ್ತು ಮಡಗಾಸ್ಕರ್‌ಗೆ ಹೈಕಮಿಷನರ್ ಆಗಿ ಸೇವೆ ಸಲ್ಲಿಸಿದ್ದಾರೆ. ಅವರ ವೃತ್ತಿಜೀವನದ ಆರಂಭದಲ್ಲಿ, ಅವರು ಭಾರತ ಮತ್ತು ನೇಪಾಳದಲ್ಲಿ ಕೆನಡಾದ ಹೈಕಮಿಷನ್‌ನಲ್ಲಿ ಮೊದಲ ಕಾರ್ಯದರ್ಶಿಯಾಗಿದ್ದರು.

><><><><><><><><

ಆರ್‌ಎಸ್‌ಎಸ್ ಮತ್ತು ಬಿಜೆಪಿ ನಡುವೆ ಯಾವುದೇ ಬಿಕ್ಕಟ್ಟು ಇಲ್ಲ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗ್ವತ್ ಸ್ಪಷ್ಟಪಡಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವುದೇ ವಿಚಾರಗಳ ಬಗ್ಗೆ ಸಂಘ ಬಿಜೆಪಿಗೆ ಸಲಹೆ ನೀಡಬಹುದು. ಆದರೆ ಅಂತಿಮ ನಿರ್ಧಾರವನ್ನು ಕೈಗೊಳ್ಳುವುದು ಬಿಜೆಪಿ ಪಕ್ಷಕ್ಕೆ ಬಿಟ್ಟಿದ್ದು ಎಂದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿಯೊಂದಿಗೆ ಆರ್‌ಎಸ್‌ಎಸ್ ಉತ್ತಮ ಸಂಪರ್ಕವನ್ನು ಹೊಂದಿದೆ. ಬಿಜೆಪಿ ಮತ್ತು ಆರ್‌ಎಸ್‌ಎಸ್ ಅಭಿಪ್ರಾಯಗಳು ಬೇರೆ ಇದ್ದರೂ ಸಹ ಎರಡರ ಉದ್ದೇಶಗಳು ಒಂದೇ ಆಗಿವೆ ಎಂದ ಅವರು, ಬಿಜೆಪಿ ಆರ್‌ಎಸ್‌ಎಸ್ ನಿರ್ದೇಶನದಂತೆ ಕಾರ್ಯನಿರ್ವಹಿಸುತ್ತದೆ ಎಂಬ ಪ್ರತಿಪಕ್ಷಗಳ ಆರೋಪವನ್ನು ತಳ್ಳಿಹಾಕಿದರು.

><><><><><><><><

ಇಂದು ರಾಷ್ಟ್ರೀಯ ಕ್ರೀಡಾ ದಿನ. ಹಾಕಿ ಮಾಂತ್ರಿಕ ಮತ್ತು ದಂತಕತೆ ಮೇಜರ್ ಧ್ಯಾನ್ ಚಂದ್ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಪ್ರತಿ ವರ್ಷ ಆಗಸ್ಟ್ ೨೯ ರಂದು ರಾಷ್ಟ್ರೀಯ ಕ್ರೀಡಾದಿನವನ್ನಾಗಿ ಆಚರಿಸಲಾಗುವುದು.  ೨೦೨೫ರ ರಾಷ್ಟ್ರೀಯ ಕ್ರೀಡಾ ದಿನದ ಘೋಷವಾಕ್ಯ "ಶಾಂತಿಯುತ ಮತ್ತು ಎಲ್ಲರನ್ನೂ ಒಳಗೊಂಡ ಸಮಾಜಗಳನ್ನು ಉತ್ತೇಜಿಸಲು ಕ್ರೀಡೆ" ಎಂಬುದಾಗಿದೆ. ಈ ಘೋಷವಾಕ್ಯ ಕ್ರೀಡೆಗಳಲ್ಲಿನ ಅಡೆತಡೆಗಳನ್ನು ಹೇಗೆ ನಿವಾರಿಸಬಹುದು, ತಂಡದ ಕೆಲಸವನ್ನು ಬೆಳೆಸಬಹುದು

ಮತ್ತು ಪ್ರದೇಶ, ಧರ್ಮ ಅಥವಾ ಹಿನ್ನೆಲೆಯ ವ್ಯತ್ಯಾಸಗಳನ್ನು ಮೀರಿ ಜನರನ್ನು ಒಗ್ಗೂಡಿಸಬಹುದು ಎಂಬುದನ್ನು ಎತ್ತಿ ತೋರಿಸುತ್ತದೆ. ಕ್ರೀಡಾದಿನದ ಜತೆಗೆ ಫಿಟ್ ಇಂಡಿಯಾ ಮಿಷನ್ ಅಡಿ ಇಂದಿನಿಂದ ಮೂರು ದಿನಗಳ ರಾಷ್ಟ್ರವ್ಯಾಪಿ ಕಾರ್ಯಕ್ರಮ ಆಯೋಜಿಸುತ್ತದೆ. "ಏಕ್ ಘಂಟಾ, ಖೇಲ್ ಕೆ ಮೈದಾನ್ ಮೈನ್" -ಆಟದ ಮೈದಾನದಲ್ಲಿ ಒಂದು ಗಂಟೆ ಅಭಿಯಾನದ ಮೂಲಕ ಜನರು ಪ್ರತಿದಿನ ಕನಿಷ್ಠ ಒಂದು ಗಂಟೆ ಹೊರಾಂಗಣ ಆಟಗಳು ಮತ್ತು ದೈಹಿಕ ಚಟುವಟಿಕೆಗೆ ಮೀಸಲಿಡಬೇಕು ಎಂಬುದನ್ನು ಪ್ರೋತ್ಸಾಹಿಸಲಾಗುವುದು.

><><><><><><><><

ರಾಷ್ಟ್ರೀಯ ಕ್ರೀಡಾ ದಿನವಾದ ಇಂದು ೧೨ನೇ ಪುರುಷರ ಏಷ್ಯಾ ಹಾಕಿ ಕಪ್ ೨೦೨೫ ಪಂದ್ಯಾವಳಿ ಬಿಹಾರದ ರಾಜ್‌ಗಿರ್‌ನಲ್ಲಿ ಆರಂಭವಾಗಲಿದೆ. ಹಾಕಿ ದಂತಕಥೆಯೆಂದೇ ಖ್ಯಾತಿ ಪಡೆದಿರುವ ಮೇಜರ್ ಧ್ಯಾನ್ ಚಂದ್ ಜನ್ಮ ದಿನವನ್ನು ರಾಷ್ಟ್ರೀಯ ಕ್ರೀಡಾದಿನವಾಗಿ ಆಚರಿಸಲಾಗುತ್ತದೆ. ಈ ಪಂದ್ಯಾವಳಿಯಲ್ಲಿ ಏಷ್ಯಾದ ಎಂಟು ಪ್ರಮುಖ ರಾಷ್ಟ್ರಗಳಾದ- ಭಾರತ, ಜಪಾನ್, ಚೀನಾ, ಕಝಾಕಿಸ್ತಾನ್, ಮಲೇಷ್ಯಾ, ಕೊರಿಯಾ, ಬಾಂಗ್ಲಾದೇಶ ಮತ್ತು ಚೈನೀಸ್ ತೈಪೆ ಭಾಗವಹಿಸಲಿವೆ. ೨೦೨೬ ರ ಎಫ್‌ಐಎಚ್ ಹಾಕಿ ವಿಶ್ವಕಪ್‌ಗೆ ಅರ್ಹತಾ ಸುತ್ತಿನ ಪಂದ್ಯವಾಗಿಯೂ ಇದನ್ನು ಗುರುತಿಸಿರುವುದರಿಂದ ಈ ಪಂದ್ಯಾವಳಿ ಮಹತ್ವ ಪಡೆದುಕೊಂಡಿದೆ. ಸೆಪ್ಟೆಂಬರ್ ೭ರ ವರೆಗೆ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ಒಟ್ಟು ೨೪ ಪಂದ್ಯ ಆಡಲಾಗುತ್ತಿದೆ. ಆತಿಥೇಯ ಭಾರತ, ಜಪಾನ್, ಚೀನಾ ಮತ್ತು ಕಝಾಕಿಸ್ತಾನ್ ಜೊತೆಗೆ ಪೂಲ್ ಎ ನಲ್ಲಿ ಸ್ಥಾನ ಪಡೆದಿದೆ. ಭಾರತ, ಇಂದು ಚೀನಾ ವಿರುದ್ಧ ತಮ್ಮ ಮೊದಲ ಪಂದ್ಯ ಆಡಲಿದ್ದು, ಆಗಸ್ಟ್ ೩೧ ರಂದು ಜಪಾನ್ ವಿರುದ್ಧ ಹಾಗೂ ಸೆಪ್ಟೆಂಬರ್ ೧ ರಂದು ಕಝಾಕಿಸ್ತಾನ್ ವಿರುದ್ಧದ ಅಂತಿಮ ಪೂಲ್ ಪಂದ್ಯವನ್ನು ಆಡಲಿದೆ. ಈವರೆಗೆ ನಡೆದ ೧೧ ಆವೃತ್ತಿಗಳಲ್ಲಿ, ಹಾಲಿ ಚಾಂಪಿಯನ್ ದಕ್ಷಿಣ ಕೊರಿಯಾ ಪುರುಷರ ಏಷ್ಯಾ ಕಪ್‌ನಲ್ಲಿ ಅತ್ಯಂತ ಯಶಸ್ವಿ ತಂಡವಾಗಿದೆ. ಭಾರತ ೨೦೦೩, ೨೦೦೭ ಮತ್ತು ೨೦೧೭ ರಲ್ಲಿ ಕಪ್ ಗೆದ್ದಿದೆ. ಹಾಕಿ ಪಂದ್ಯಗಳನ್ನು ನೋಡಲು ಆಕರ್ಷಿಸುವ ಸಲುವಾಗಿ ಹಾಕಿ ಇಂಡಿಯಾ ಎಲ್ಲಾ ಪಂದ್ಯಗಳಿಗೆ ಪ್ರವೇಶ ಉಚಿತ ಪ್ರವೇಶ ಘೋಷಿಸಿದೆ.

><><><><><><><><

ರಾಷ್ಟ್ರೀಯ ಕ್ರೀಡಾಕೂಟಗಳ  ಪದಕ ವಿಜೇತರಿಗೆ ನಗದು ಪುರಸ್ಕಾರವನ್ನು ಹೆಚ್ಚಿಸಿ, ಚಿನ್ನ ಪದಕ ವಿಜೇತರಿಗೆ ೭ ಲಕ್ಷ ರೂಪಯಿ, ಬೆಳ್ಳಿ ಪದಕ ವಿಜೇತರಿಗೆ ೫ ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತರಿಗೆ ೩ ಲಕ್ಷ ರೂ. ನೀಡಲು ರಾಜ್ಯ ಸರ್ಕಾರ ತೀರ್ಮಾನಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.  ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಬೆಂಗಳೂರಿನಲ್ಲಿ ನಿನ್ನೆ ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ವಿವಿಧ ಕ್ರೀಡಾ ವಿಭಾಗಗಳಲ್ಲಿ ಭಾಗವಹಿಸಿ ಪದಕಗಳನ್ನು ಪಡೆದ ಕ್ರೀಡಾ ಪಟುಗಳಿಗೆ ನೇರ ನಗದು ಪುರಸ್ಕಾರ ಪ್ರದಾನ ಮಾಡಿ ಮಾತನಾಡಿದರು. ಉತ್ತರಾಖಂಡದಲ್ಲಿ ನಡೆದ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕದ ಕ್ರೀಡಾಪಟುಗಳು ರಾಜ್ಯಕ್ಕೆ ಐದನೇ ಸ್ಥಾನ ದೊರಕಿಸಿಕೊಟ್ಟು ಕೀರ್ತಿ ತಂದಿದ್ದಾರೆ. ಕ್ರೀಡಾಕೂಟದಲ್ಲಿ ರಾಜ್ಯದ ಕ್ರೀಡಾಪಟುಗಳು ೩೪ ಚಿನ್ನ, ೧೮ ಬೆಳ್ಳಿ ಹಾಗೂ ೨೮ ಕಂಚಿನ ಪದಕಗಳನ್ನು ಗೆದ್ದಿರುವುದು ನಮಗೆಲ್ಲ ಹೆಮ್ಮೆಯ ವಿಷಯ ಎಂದು  ಕ್ರೀಡಾಕೂಟದಲ್ಲಿ ಭಾಗವಹಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು. ಬಜೆಟ್‌ನಲ್ಲಿ ಘೋಷಿಸಿರುವಂತೆ ಒಲಂಪಿಕ್ಸ್ , ಏಷ್ಯನ್ ಗೇಮ್ಸ್, ಹಾಗೂ  ಕಾಮನ್ ವೆಲ್ತ್ ಗೇಮ್ಸ್  ನಲ್ಲಿ ಚಿನ್ನದ ಪದಕ  ಗೆದ್ದವರಿಗೆ ೫ ಕೋಟಿ, ಬೆಳ್ಳಿ ಗೆದ್ದವರಿಗೆ ೩ ಹಾಗೂ ಕಂಚು ಗೆದ್ದವರಿಗೆ ೨ ಕೋಟಿ ರೂ.ಗಳ ಬಹುಮಾನ ನೀಡಲಾಗುವುದು  ಎಂದರು.

><><><><><><><><><